FEBRUARY 4,2025

ALL INDIA RADIO- DHARWAD

PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

ಬಡವರ ಹಿತರಕ್ಷಣೆಗೆ ಸರ್ಕಾರ ಬದ್ಧವಾಗಿದೆ. ಸಾಲ ವಸೂಲಾತಿ ಹೆಸರಲ್ಲಿ, ಸಣ್ಣ ಹಣಕಾಸು ಸಂಸ್ಥೆಗಳಿಂದ, ಬಡವರಿಗೆ ಆಗುತ್ತಿರುವ ಕಿರುಕುಳ ತಪ್ಪಿಸಲು, ಸರ್ಕಾರ ಸುಗ್ರೀವಾಜ್ಞೆ ರೂಪಿಸಿದೆ ಎಂದು, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಣ್ಣ ಹಣಕಾಸು ಸಂಸ್ಥೆಗಳನ್ನು ನಿಯಂತ್ರಿಸಲು, ಪೊಲೀಸರಿಗೆ ಹೆಚ್ಚಿನ ಅಧಿಕಾರ ನೀಡಲಾಗುವುದು ಎಂದು ಸ್ಪ ್ಟಪಡಿಸಿದರು.

<><><>

ಸಣ್ಣ ಹಣಕಾಸು ಸಂಸ್ಥೆಗಳ ಹಾವಳಿ ತಡೆಗೆ ಸುಗ್ರೀವಾಜ್ಞೆ ರೂಪಿಸಿದ್ದು, ರಾಜ್ಯಪಾಲರು ಅಂಕಿತ ಹಾಕಿದ ತಕ್ಷಣ, ಜಾರಿಗೊಳ್ಳಲಿದೆ ಎಂದು, ಗೃಹ ಖಾತೆ ಸಚಿವ ಜಿ.ಪರಮೇಶ್ವರ್ ತಿಳಿಸಿದ್ದಾರೆ.

<><><>

ಅಂತಾರಾಷ್ಟ್ರೀಯ ತರೀಭೂಮಿ, ಜೌಗು ಪ್ರದೇಶಗಳ ದಿನಾಚರಣೆ ಹಿನ್ನೆಲೆ, ಕೆರೆ, ನದಿ, ತೊರೆ, ಹಿನ್ನೀರಿನ ತಾಣಗಳು, ಭತ್ತದ ಗದ್ದೆಗಳು, ಹೀಗೆ ಮುಖ್ಯವಾಗಿ, ಜಲವಾಸಿ ಜೀವಿಗಳಿಗೆ, ಪ್ರಧಾನ ನೆಲೆ ಒದಗಿಸುವ, ಜೌಗು ಪ್ರದೇಶಗಳ ಪೋಷಣೆ ಬಗ್ಗೆ ಜನ ಜಾಗ್ರತಿ ಕಾರ್ಯಕ್ರಮ ರಾಜ್ಯದ ವಿವಿಧೆಡೆ ಜರುಗಿದವು. ಪ್ರದೇಶ ಸಮಾಚಾರಕ್ಕಾಗಿ ಹೆಚ್ಚಿನ ಮಾಹಿತಿ ನೀಡಿದ್ದಾರೆ, ವಿಜಯನಗರ ಜಿಲ್ಲೆ, ಹೊಸಪೇಟೆಯ ಹಿರಿಯ ಪರಿಸರ ವಿಜ್ಞಾನಿ, ಡಾಕ್ಟರ್ ಸಮದ್ ಕೊಟ್ಟೂರು.

<><><>

ಡಾ. ಸಮದ್ ಕೊಟ್ಟೂರು ಧ್ವನಿ 41 ಸೆಕೆಂದುಗಳು

<><><>

ಹುಬ್ಬಳ್ಳಿ–ಧಾರವಾಡದಲ್ಲಿ, ಡಿಜಿಟಲ್ ಜಾಹಿರಾತು ಫಲಕಗಳಿಗೆ ಆದ್ಯತೆ ನೀಡಬೇಕು. ನಗರದ ಅಂದಗೆಡಿಸುವ, ಅನಧಿಕೃತ ಜಾಹಿರಾತುದಾರರ ವಿರುದ್ಧ, ಕಾನೂನು ರೀತ್ಯಾ ಕ್ರಮ ಜರುಗಿಸಬೇಕು ಎಂದು, ರಾಷ್ಟ್ರೀಯ ಹಸಿರು ನ್ಯಾಯಾಧೀಕರಣದ, ರಾಜ್ಯ ಸಮಿತಿ ಅಧ್ಯಕ್ಷ, ನ್ಯಾಯಮೂರ್ತಿ ಸುಭಾ ್ ಆಡಿ ಸೂಚಿಸಿದ್ದಾರೆ. ಹುಬ್ಬಳ್ಳಿ ನಿರೀಕ್ಷಣಾ ಮಂದಿರದಲ್ಲಿ, ಪರಿಸರ ನಿಯಂತ್ರಣ ಮಂಡಳಿ ಹಾಗೂ ಮಹಾನಗರ ಪಾಲಿಕೆ ಅಧಿಕಾರಿಗಳೊಂದಿಗೆ ಅವರು ಸಭೆ ನಡೆಸಿದರು.

ಘನತ್ಯಾಜ್ಯದ ವೈಜ್ಞಾನಿಕ ನಿರ್ವಹಣೆ ಮತ್ತು ವಿಲೇವಾರಿ, ಪಾದಚಾರಿ ಮಾರ್ಗಗಳ ಅತಿಕ್ರಮಣ ತೆರವು, ರಸ್ತೆ ಮೇಲೆ ವಾಹನಗಳ ನಿಲುಗಡೆಗೆ ದಂಡ ವಿಧಿಸುವಂತೆ, ಅವರು ನಿರ್ದೇಶಿಸಿದರು.

<><><>

ದೇಶದ ಭಾಷೆಯ ಅಳಿವು–ಉಳಿವು ಸುಪ್ರೀಂ ಕೋರ್ಟ್‌ನಲ್ಲಿ ನಿರ್ಣಯವಾಗುವ ವಿಷಯವಲ್ಲ, ದೇಶಿಯ ಭಾಷೆಯ ಉಳಿವಿಗಾಗಿ ರಾಜ್ಯ ಹಾಗೂ ಕೇಂದ್ರ ಸರ್ಕಾರವು ಕಾರ್ಯತತ್ಪರವಾಗಬೇಕಿದೆ ಎಂದು ಸಾಹಿತಿ ವೆಂಕಟೇಶ ಮಾಚಕನೂರ ಹೇಳಿದರು. ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘದಲ್ಲಿ ಜರುಗುತ್ತಿರುವ 17 ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಚಿಂತನಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು. ಇಂದು ಮಧ್ಯಾಹ್ನ 3 ಗಂಟೆಗೆ ಸಮ್ಮೇಳಾನಧ್ಯಕ್ಷ ಪ್ರೊಫೆಸರ್ ಎಸ್.ಆರ್ ಗುಂಜಾಳ ಅವರೊಂದಿಗೆ ಸಂವಾದ ಕಾರ್ಯಕ್ರಮ ನಡೆಯಲಿದೆ. ಸಂಜೆ 6.30 ಕ್ಕೆ ಸಮಾರೋಪ ಸಮಾರಂಭ ಜರುಗಲಿದೆ.

<><><>

ಮೈಸೂರಿನ ನಿರ್ದಿಗಂತ ಸಂಸ್ಥೆ ವತಿಯಿಂದ ಧಾರವಾಡ ನಗರದ ಸೃಜನಾ ರಂಗಮಂದಿರದಲ್ಲಿ, ನಿರ್ದಿಗಂತ ನಾಟಕೋತ್ಸವವು 22 ನೇ ತಾರೀಖಿನಿಂದ 25 ರ ವರೆಗೆ ನಡೆಯಲಿದೆ, ಹಿರಿಯ ಭಾಷಾ ವಿಮರ್ಶಕ ಗಣೇಶ ಎನ್. ದೇವಿ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

<><><>

ಗದಗ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ – ಗಿಮ್ಸ್‌ನಲ್ಲಿ, 10 ಕೋಟಿ ರೂಪಾಯಿ ವೆಚ್ಚದಲ್ಲಿ, 'ಕ್ಯಾಥ್ ಲ್ಯಾಬ್' ಕಾರ್ಯಾರಂಭಿಸಿದ್ದು, ಬಡವರಿಗೆ ಹೆಚ್ಚು ಅನುಕೂಲವಾಗಲಿದೆ ಎಂದು, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ತಿಳಿಸಿದ್ದಾರೆ. ಕ್ಯಾಥಲ್ಯಾಬ್ ಹಾಗೂ ಸೂಪರ್ ಸ್ಪೆ ಾಲಿಟಿ ಹೃದ್ರೋಗ ಚಿಕಿತ್ಸಾ ಘಟಕವನ್ನು ಉದ್ಘಾಟಿಸಿ, ಅವರು ಮಾತನಾಡಿದರು. 185 ಕೋಟಿ ರೂಪಾಯಿ ವೆಚ್ಚದಲ್ಲಿ ಕಾಲೇಜು ಕಟ್ಟಡ ನಿರ್ಮಾಣವಾಗಿದೆ. ಜನರಿಗೆ ಉಪಯುಕ್ತ ಸೇವೆ ದೊರೆಯಲಿ ಎಂದರು.

<><><>

ವಿಶ್ವವಿದ್ಯಾಲಯ ಅನುದಾನ ಆಯೋಗವು ಯು.ಜಿ.ಸಿ. ಉಪ ಕುಲಪತಿಗಳ ನೇಮಕ ಹಾಗೂ ಉನ್ನತ ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿ, ಹೊರಡಿಸಿರುವ ಕರಡು ನಿಯಮಾವಳಿಗಳ ಕುರಿತು ಚರ್ಚಿಸಲು, ನಾಳೆ ಬೆಂಗಳೂರಿನಲ್ಲಿ ರಾಷ್ಟ್ರೀಯ ಸಮಾವೇಶ ಜರುಗಲಿದೆ. ಉನ್ನತ ಶಿಕ್ಷಣ ಖಾತೆ ಸಚಿವ ಎಂ.ಸಿ. ಸುಧಾಕರ್ ಮಾಹಿತಿ ನೀಡಿ, ಒಂದು ದಿನದ ಉನ್ನತ ಶಿಕ್ಷಣ ಸಚಿವರ ರಾಷ್ಟ್ರೀಯ ಸಮಾವೇಶದಲ್ಲಿ, ಏಳು ರಾಜ್ಯಗಳ ಸಚಿವರು ಪಾಲ್ಗೊಳ್ಳಲಿದ್ದಾರೆ ಎಂದರು.

<><><>

ವಿಜಯಪುರ ಜಿಲ್ಲೆಯಲ್ಲಿ, 44 ಹೊಸ ಕುಷ್ಠ ರೋಗ ಪ್ರಕರಣಗಳು ಪತ್ತೆಯಾಗಿವೆ ಎಂದು, ನಿರ್ಮೂಲನಾಧಿಕಾರಿ ಡಾಕ್ಟರ್ ಅರ್ಚನಾ ಕುಲಕರ್ಣಿ, ತಿಳಿಸಿದ್ದಾರೆ.

<><><>

ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆ ಅಂಗವಾಗಿ, ಹಾವೇರಿಯಲ್ಲಿ ಜನ ಜಾಗ್ರತಿ ದ್ವಿಚಕ್ರ ವಾಹನ ಜಾಥಾಕ್ಕೆ, ಪೊಲೀಸ್ ಉಪ ಅಧೀಕ್ಷಕ ಎಂ.ಎಸ್. ಪಾಟೀಲ, ಚಾಲನೆ ನೀಡಿದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..

<><><>